ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕಗೋಪುರ, 03ನೇ ಮಹಡಿ, ಡಾ||ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
**E-mail ID:icps.kar@gmail.com** **Phone No: 080-22879381**

ಸಂಖ್ಯೆ:ಕರಾಸಮರಸೊ/ದತ್ತು-19/2018-19 ದಿನಾಂಕ:03.02.2021

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ
ಬೆಂಗಳೂರು.

ಮಾನ್ಯರೇ,

ವಿಷಯ: ಮಕ್ಕಳ ರಕ್ಷಣೆಯ ಚೈಲ್ಡ್‌ಲೈನ್1098 ತುರ್ತು ಸಹಾಯವಾಣಿ/ದೂರವಾಣಿ ಸಂಖ್ಯೆಯ ಪ್ರದರ್ಶನ ಕುರಿತು"

ಉಲ್ಲೇಖ: ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ:ಸಕನಿ/ಸಿಎಸ್-4/ಸಿಆರ್-17/2021 ದಿನಾಂಕ:02.12.2020

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಕ್ಕಳ ರಕ್ಷಣೆಯ ಚೈಲ್ಡಲೈನ್ 1098 ತುರ್ತು ಸಹಾಯವಾಣಿ/ದೂರವಾಣಿ ಸಂಖ್ಯೆಯನ್ನು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ವಸತಿ ಗೃಹಗಳು,ವಸತಿ ಶಾಲೆಗಳು, ನಿರಾಶ್ರಿತರ ಕೇಂದ್ರಗಳಲ್ಲಿ ಹಾಗೂ ಚೈಲ್ಡ್‌ಲೈನ್ ಸಂಖ್ಯೆಯನ್ನು ಮೆಟ್ರಿಕ್ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ಮತ್ತು ಕಛೇರಿ ಸೂಚನಾ ಫಲಕಗಳಲ್ಲಿ ಪ್ರಕಟಿಸಲು ನಿರ್ದೇಶನ ನೀಡುವಂತೆ ಜಂಟಿ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ನಗರ ರವರಿಗೆ ಸೂಚಿಸಿರುವುದು ಸ್ವಾಗತಾರ್ಹ.

ಮುಂದುವರೆದಂತೆ ಚೈಲ್ಡ್‌ಲೈನ್-1098 ಈ ಸಂಖ್ಯೆಯು ಭಾರತದ ಸರ್ಕಾರದ ತುರ್ತು ದೂರವಾಣಿ ಸಂಖ್ಯೆ ಸಂಖ್ಯೆಯಾಗಿದ್ದು, ಮಕ್ಕಳ ಸಹಾಯಕ್ಕಾಗಿ ದಿನದ 24 ಗಂಟೆಗಳಲ್ಲಿಯೂ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿದೆ. ಮಕ್ಕಳ ಸಹಾಯಕ್ಕಾಗಿ ಕರ್ತವ್ಯ ನಿರ್ವಹಿಸುತ್ತಿರುವ ಚೈಲ್ಡ್‌ಲೈನ್-1098 ಕುರಿತು ಸಾರ್ವಜನಿಕರು/ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು ಅಗತ್ಯವಾಗಿರುತ್ತದೆ.

ಆದ್ದರಿಂದ ಈ ನಿಟ್ಟಿನಲ್ಲಿ ಮಕ್ಕಳ ರಕ್ಷಣೆಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಚೈಲ್ಡ್‌ಲೈನ್-1098 ಬಗ್ಗೆ ತಮ್ಮ ಇಲಾಖಾ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಇನ್ನುಳಿದ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳಿಗೆ ಈ ಪ್ರಕಾರವೇ ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಲು ಈ ಮೂಲಕ ಕೋರಿದೆ.

ತಮ್ಮ ವಿಶ್ವಾಸಿ,
03.02.2021
ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

ಪ್ರತಿಯನ್ನು: ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಎಲ್ಲಾ ಜಿಲ್ಲೆಗಳು ರವರಿಗೆ ಮಾಹಿತಿಗಾಗಿ.

desktop(Newfolder)